# ಪ್ರಧಾನ ಸಿವಿಲ್ ನ್ಯಾಯಾದೀಶರು, ಜೆ.ಎಮ್.ಎಫ್. ಸಿ–2 ರಾಯಚೂರು

**ಸಿ.ಸಿ.ನಂ.4317/2022**

**ಪಿ.ಡಬ್ಲ್ಯೂಃ 4**
**ಸಿ.ಡಬ್ಲ್ಯೂಃ 8**

| | |
|---|---|
| ಸಾಕ್ಷಿದಾರರ ಹೆಸರು | : ಬಸಲಿಂಗಪ್ಪ ಚಿಮ್ಮಲಗಿ |
| ತಂದೆಯ ಹೆಸರು | ಃ ನಂದೆಪ್ಪ |
| ವಯಸ್ಸು | : 46 ವರ್ಷ |
| ಉದ್ಯೋಗ | ಃ ಅಬಕಾರಿ ನಿರೀಕ್ಷಕರು |
| ವಾಸಸ್ಥಳ | : ಹೊನ್ನಳ್ಳಿ ದಾವಾಣಗೆರೆ |

**ಇಂದು ದಿನಾಂಕ** 12–04–2023 **ರಂದು ಸಾಕ್ಷಿಯು ದೃಶ್ಯ ವಿದ್ಯುನ್ಮಾನ ಮೂಲಕ ಹಾಜರಾಗಿದ್ದು ಅವರಿಗೆ ಪ್ರಮಾಣ ವಚನವನ್ನು ದೃಶ್ಯ ವಿದ್ಯುನ್ಮಾನ ಮೂಲಕ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ. ರವರಿಂದ:**

2015 ರಿಂದ ಜನವರಿ 2022 ರವರೆಗೆ ರಾಯಚೂರಿನ ಅಬಕಾರಿ ಇಲಾಖೆಯಲ್ಲಿ ಅಬಕಾರಿ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಮುಂದಿನ ತನಿಖೆಯನ್ನು ಚಾ.ಸ.7 ರವರಿಂದ ಪಡೆದುಕೊಂಡು ತನಿಖೆಯನ್ನುಮುಂದುವರೆಸಿ ಸಿಬ್ಬಂದಿಗಳಾದ ಚಾ.ಸ.4 ಮತ್ತು 5 ರವರ ಹೇಳಿಕೆಯನ್ನು ಪಡೆದುಕೊಂಡು ನಂತರ ನಗರ ಸಭೆಯವರಿಗೆ ಅರ್ಜಿಯನ್ನು ಬರೆದು ವರದಿಯನ್ನು ಸ್ವೀಕರಿಸಕೊಂಡು ತನಿಖೆ ಪೂರ್ಣಗೊಳಿಸಿ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೇನೆ. ಸಾಕ್ಷಿಯ ತಾನೂ ಬರೆದ ಅರ್ಜಿ ಮತ್ತು ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ.5 ಮತ್ತು ನಿ.ಪಿ.6 ಎಂದು ಸಾಕ್ಷಿಯ ಸಹಿಯನ್ನು ನಿ.ಪಿ.5(ಎ) ಮತ್ತು ನಿ.ಪಿ.6(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯ ಮುಂದಿರುವ ಮುದ್ದೆಮಾಲುಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ಮು.ಮಾ. 1 ರಿಂದ 4 ಎಂದು ಗುರುತಿಸಲಾಗಿರುತ್ತದೆ.

**ಪಾಟೀ ಸವಾಲು: ಆರೋಪಿ ಪರ ಮಾನ್ಯ ವಕೀಲರಿಂದ:**

ಚಾ.ಸ.1 ನನ್ನ ಸಹ್ಯೋದ್ಯೋಗಿ ಎಂದರೆ ಸರಿ. ಜಪ್ತು ಪಡೆಸಿಕೊಂಡ ಮುದ್ದೇಮಾಲಿಗೂ ಆರೋಪಿತನಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಸಾಕ್ಷಿದಾರರ

ಹೇಳಿಕೆಗಳನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಅಂಕೆ ಸಂಖ್ಯೆಗೊಸ್ಕರ ಆರೋಪಿತರ ವಿರುದ್ದ ಸುಳ್ಳು ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಚಾಸ 1 ರವರು ನನ್ನ ಸಹ್ಯೋದ್ಯೋಗಿ ಆಗಿದ್ದರಿಂದ ಅವರು ನೀಡಿದ ದೂರಿಗೆ ಅನುಕೂಲವಾಗಲೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ: ಇಲ್ಲ;</u>**

(ಸಾಕ್ಷಿಯು ನೀಡಿದ ಸಾಕ್ಷವನ್ನು ಯಥಾವತ್ತಾಗಿ ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

**ಓ.ಹೇ.ಕೇ.ಸರಿ ಇದೆ.**

ಸಹಿ/-

ಜೆ.ಎಂ. ಎಫ್. ಸಿ.-2, ರಾಯಚೂರು

# ಪ್ರಧಾನ ಸಿವಿಲ್ ನ್ಯಾಯಾದೀಶರು, ಜೆ.ಎಮ್.ಎಫ್. ಸಿ–2 ರಾಯಚೂರು

**ಸಿ.ಸಿ.ನಂ. 4317/2022**

**ಪಿ.ಡಬ್ಲ್ಯೂಃ 3**
**ಸಿ.ಡಬ್ಲ್ಯೂಃ 2**

ಸಾಕ್ಷಿದಾರರ ಹೆಸರು : ಬಸವರಾಜ್

ತಂದೆಯ ಹೆಸರು : ಹನುಮಂತಪ್ಪ

ವಯಸ್ಸು : 36 ವರ್ಷ

ಉದ್ಯೋಗ : ಕೂಲಿ ಕೆಲಸ

ವಾಸಸ್ಥಳ : ರಾಯಚೂರು.

ಇಂದು ದಿ:12–04–2023 ರಂದು ಸಾಕ್ಷಿಯನ್ನು ಪುನ: ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ. ರವರಿಂದ:**

ನನಗೆ ಚಾಸಾ 3 ರವರ ಪರಿಚಯವಿಲ್ಲ. ನನಗೆ ಆರೋಪಿತರು ಪರಿಚಯವಿಲ್ಲ. ಈಗ ಸಾಕ್ಷಿಗೆ ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯನ್ನು ಮತ್ತು ಅದರ ಮೇಲೆ ಇರುವ ತನ್ನ ಸಹಿಯನ್ನು ಗುರುತಿಸಿರುವುದರಿಂದ, ಸದರಿ ಪಂಚನಾಮೆಯನ್ನು ಈಗಾಗಲೇ ನಿ:ಪಿ–1 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿ:ಪಿ–1(ಸಿ) ಎಂದು ಗುರುತಿಸಲಾಯಿತು. ನಿ:ಪಿ–1 ಕ್ಕೆ ನಾನು ಪೋ.ಠಾ. ಯಲ್ಲಿ ಸಹಿ ಮಾಡಿರುತ್ತೇನೆ. ನನಗೆ ನಿ:ಪಿ–1 ರ ಒಳಾಂಶಗಳ ಬಗ್ಗೆ ಮಾಹಿತಿ ಇಲ್ಲ. ಪೊಲಿಸರು ನನ್ನ ಸಮಕ್ಷಮ ಯಾವುದೇ ಸ್ಥಳ ಮತ್ತು ಜಪ್ತಿ ಪಂಚನಾಮೆ ಮಾಡಿರುವುದಿಲ್ಲ.

**ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ ರವರು ಪ್ರಾರ್ಥಿಸುತ್ತಾರೆ. ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಸ.ಸ.ಅ. ರವರಿಂದ:**

ದಿ: 04–04–2020 ರಂದು ಮದ್ಯಾಹ್ನ 03–30 ರಿಂದ 04–40 ಗಂಟೆಯವರೆಗೆ ನನ್ನ ಮತ್ತು ಚಾಸಾ–3 ರವರ ಸಮಕ್ಷಮ ನಿ:ಪಿ–1 ರಂತೆ ಸ್ಥಳದ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆ ಕಾಲಕ್ಕೆ 2. ಕೆ.ಜಿ. 500 ಗ್ರಾಂ. ಸಿಹೆಚ್. ಪೌಡರ್, 1 ಕೆ.ಜಿ. ಸ್ಯಾಕ್ರೀನ್, 1 ಕೆ.ಜಿ. ಸಿಟ್ರಿಕ್ ಆಸಿಡ್. 15 ಸಾಮಾರ್ಥ್ಯ 2 ಕೊಡದಲ್ಲಿ 30 ಲೀ. ಸೇಂದಿಯನ್ನು ಆರೋಪಿತರ ಕಡೆಯಿಂದ ನನ್ನ ಮತ್ತು ಚಾ.ಸ.2.ರವರ ಸಮಕ್ಷಮ ಪೊಲೀಸರು ಜಪ್ತಿ ಪಡಿಸಿಕೊಂಡಿರುತ್ತಾರೆ ಎಂದರೆ

ಸರಿಯಲ್ಲ. ಜಪ್ತಿ ಪಡಿಸಿಕೊಂಡ ವಸ್ತುಗಳಿಂದ 500 ಗ್ರಾಂ. ಸಿಹೆಚ್. ಪೌಡರ್, 300 ಗ್ರಾಂ. ಸ್ಯಾಕ್ರಿನ್ 300 ಸಿಟ್ರಿಕ್ ಅಸೀಡ್ ಮತ್ತು 1 ಲೀ. ಸಾಮಾರ್ಥ್ಯದ ಒಂದು ಪ್ಲಾಸ್ಟಿಕ್ ಬಾಟಲಿನಲ್ಲಿ 1 ಲೀ. ಸೇಂದಿಯನ್ನು ರಾಸಾಯನಿಕ ಪರೀಕ್ಷೆಗಾಗಿ ಪ್ರತ್ಯೇಕವಾಗಿ ತೆಗೆದು ಮಹಜರು ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಿ.ಪಿ.1 ರಲ್ಲಿರುವ ಎಲ್ಲ ಒಳಾಂಶಗಳು ಗೊತ್ತಿದ್ದರು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರಿಂದ:**

ಪಾಟೀ ಸವಾಲು ಇಲ್ಲ ಎಂದು ಹೇಳುತ್ತಾರೆ.

**ಮರು ವಿಚಾರಣೆ: ಇಲ್ಲ;**

(ಸಾಕ್ಷಿಯು ನೀಡಿದ ಸಾಕ್ಷವನ್ನು ಯಥಾವತ್ತಾಗಿ ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

**ಓ.ಹೇ.ಕೇ.ಸರಿ ಇದೆ.**

ಸಹಿ/-

ಜೆ.ಎಂ.ಎಫ್.ಸಿ.2, ರಾಯಚೂರು